**Akashvani : Bangalore**
**National Bulletin In Kannada**
**12.01.2025 / 7.35 am**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**12.01.2025 / 7.35 am**

**<><*<><>*><>**

ಮುಖ್ಯಾಂಶಗಳು

೧. ನವದೆಹಲಿಯಲ್ಲಿಂದು ವಿಕಸಿತ ಭಾರತ್ ಯುವ ನಾಯಕರ ಸಂವಾದದಲ್ಲಿ ಪ್ರಧಾನಿ ನರೇಂದ್ರ ಮೋದಿ ಭಾಗಿ

೨. ವಿಕಸಿತ ಭಾರತ ಗುರಿ ಸಾಧಿಸುವಲ್ಲಿ ಯುವಕರ ಪಾತ್ರ ನಿರ್ಣಾಯಕ- ರಕ್ಷಣಾ ಸಚಿವ ರಾಜನಾಥ್ ಸಿಂಗ್

೩. ಉತ್ತರಪ್ರದೇಶದ ಪ್ರಯಾಗ್‌ರಾಜ್‌ನಲ್ಲಿ ನಾಳೆ ಅಮೃತ ಸ್ನಾನದೊಂದಿಗೆ ಮಹಾಕುಂಭ ಮೇಳ ಆರಂಭ

೪. ಮಹಿಳಾ ಅಂತಾರಾಷ್ಟ್ರೀಯ ಏಕದಿನ ಕ್ರಿಕೆಟ್; ಗುಜರಾತ್‌ನ ರಾಜಕೋಟ್‌ನಲ್ಲಿಂದು ಭಾರತ - ಐರ್ಲೆಂಡ್ ಮುಖಾಮುಖಿ

**<><*<><>*><>**

ರಾಷ್ಟ್ರೀಯ ಯುವ ದಿನಾಚರಣೆ ಹಿನ್ನೆಲೆಯಲ್ಲಿ ನವದೆಹಲಿಯ ಭಾರತ ಮಂಟಪದಲ್ಲಿ ನಡೆದಿರುವ ಕಾರ್ಯಕ್ರಮದಲ್ಲಿ ಪ್ರಧಾನಿ ನರೇಂದ್ರ ಮೋದಿ ಇಂದು ಭಾಗವಹಿಸಲಿದ್ದಾರೆ. ದೇಶದ ಶ್ರೇಷ್ಠ ಆಧ್ಯಾತ್ಮಿಕ ನಾಯಕರಲ್ಲಿ ಒಬ್ಬರಾದ ಸ್ವಾಮಿ ವಿವೇಕಾನಂದರ ಜನ್ಮದಿನಾಚರಣೆ ಸ್ಮರಣಾರ್ಥ ಆಚರಿಸಲಾಗುವ ಯುವ ದಿನಾಚರಣೆಯ ಸಂದರ್ಭದಲ್ಲಿ ಪ್ರಧಾನಿ ದೇಶಾದ್ಯಂತ ಮೂರು ಸಾವಿರ ಯುವ ನಾಯಕರೊಂದಿಗೆ ಸಂವಾದ ನಡೆಸಲಿದ್ದಾರೆ. ಇದೇ ವೇಳೆ ಅವರು, ಸಂವಾದ ಕಾರ್ಯಕ್ರಮದಲ್ಲಿ ಭಾಗವಹಿಸುವ ಯುವ ನಾಯಕರು, ಹತ್ತು ಆಯ್ದ ವಿಷಯಗಳ ಮೇಲೆ ಬರೆದ, ಅತ್ಯುತ್ತಮ ಲೇಖನಗಳ ಸಂಕಲನವನ್ನು ಬಿಡುಗಡೆಗೊಳಿಸಲಿದ್ದಾರೆ. ತಂತ್ರಜ್ಞಾನ, ಸುಸ್ಥಿರತೆ, ಮಹಿಳಾ ಸಬಲೀಕರಣ, ಉತ್ಪಾದನೆ ಹಾಗೂ ಕೃಷಿ ಆಯ್ದ ಕೆಲವು ವಿಷಯಗಳಾಗಿವೆ. ಬಳಿಕ ಪ್ರಧಾನಿ ಯುವ ನಾಯಕರೊಂದಿಗೆ ಔತಣಕೂಟದಲ್ಲಿ ಪಾಲ್ಗೊಳ್ಳಲಿದ್ದು, ಇದು ವಿಚಾರ, ಅನುಭವ ಮತ್ತು

ಆಕಾಂಕ್ಷೆಗಳನ್ನು ಪರಸ್ಪರ ವಿನಿಮಯ ಮಾಡಿಕೊಳ್ಳಲು ಅವಕಾಶ ಕಲ್ಪಿಸಲಿದೆ. ಈ ಕಾರ್ಯಕ್ರಮ ಯುವಜನತೆಯನ್ನು ದೇಶದ ಅಭಿವೃದ್ಧಿಯ ಪಯಣದಲ್ಲಿ ತೊಡಗಿಸಿಕೊಳ್ಳುವ ವಿಶಿಷ್ಟ ಉಪಕ್ರಮವಾಗಿದೆ ಎಂದು ಪ್ರಧಾನಮಂತ್ರಿ ನರೇಂದ್ರ ಮೋದಿ ಹೇಳಿದ್ದಾರೆ. 'ರಾಷ್ಟ್ರೀಯ ಯುವಜನೋತ್ಸವ-೨೦೨೫' ಮತ್ತು 'ವಿಕಸಿತ ಭಾರತ ಯಂಗ್ ಲೀಡರ್ಸ್ ಡೈಲಾಗ್' ಕುರಿತಂತೆ ಕೇಂದ್ರ ಯುವಜನ ಮತ್ತು ಕ್ರೀಡಾ ಖಾತೆ ರಾಜ್ಯ ಸಚಿವ ರಕ್ಷಾ ಖಡ್ಸೆ ಬರೆದಿರುವ ಲೇಖನವನ್ನು ಪ್ರಧಾನಿಯವರು ಹಂಚಿಕೊಂಡು ಈ ವಿಷಯ ತಿಳಿಸಿದ್ದಾರೆ. ವಿಕಸಿತ ಭಾರತದ ಆಶಯಗಳನ್ನು ಸಾಕಾರಗೊಳಿಸಲು ಯುವ ಮನಸ್ಸುಗಳ ಶಕ್ತಿ, ಸೃಜನಶೀಲತೆ ಮತ್ತು ನಾಯಕತ್ವಗಳಿಗೆ ರೂಪು ನೀಡುವುದು ಈ ಉಪಕ್ರಮದ ಉದ್ದೇಶವಾಗಿದೆ. ಈ ಸಂವಾದ ಕಾರ್ಯಕ್ರಮ, ರಾಜಕೀಯ ಹಿನ್ನೆಲೆ ಇಲ್ಲದಿರುವ ಒಂದು ಲಕ್ಷ ಯುವಕರನ್ನು ರಾಜಕೀಯದಲ್ಲಿ ತೊಡಗಿಕೊಳ್ಳುವಂತೆ ಮಾಡುವ ಪ್ರಧಾನಿಮಂತ್ರಿ ಅವರ ದೃಷ್ಟಕೋನದೊಂದಿಗೆ ಹೊಂದಿಕೆಯಾಗುತ್ತದೆ.

**<><*<><>*><>**

ಯುವಕರು ತಮ್ಮ ಸಾಮರ್ಥ್ಯವನ್ನು ಅರಿತು, ೨೦೪೭ ರವೇಳೆಗೆ ವಿಕಸಿತ ಭಾರತದ ಗುರಿಯ ಸಾಕಾರಕ್ಕೆ ಅನುಕೂಲವಾಗುವಂತೆ ತಮ್ಮ ಆಕಾಂಕ್ಷೆಗಳನ್ನು ರೂಪಿಸಿಕೊಳ್ಳುವಂತೆ ಕೇಂದ್ರ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಕರೆ ನೀಡಿದ್ದಾರೆ. ನಿನ್ನೆ ಮೀರತ್‌ನ ಐಐಎಂಟಿ ವಿಶ್ವವಿದ್ಯಾಲಯದ ಘಟಿಕೋತ್ಸವ ಸಮಾರಂಭವನ್ನುದ್ದೇಶಿಸಿ ಮಾತನಾಡಿದ ರಕ್ಷಣಾ ಸಚಿವರು, ಭಾರತವನ್ನು ಅಭಿವೃದ್ಧಿ ಹೊಂದಿದ ರಾಷ್ಟ್ರವನ್ನಾಗಿ ಮಾಡುವ ರಾಷ್ಟ್ರೀಯ ಸಂಕಲ್ಪವನ್ನು ಸಾಕಾರಗೊಳಿಸುವಲ್ಲಿ ದೇಶದ ಯುವಕರು ವಹಿಸಬಹುದಾದ ನಿರ್ಣಾಯಕ ಪಾತ್ರವನ್ನು ಒತ್ತಿ ಹೇಳಿದರು.

ಧ್ವನಿ: ರಕ್ಷಣಾ ಸಚಿವ ರಾಜನಾಥ್ ಸಿಂಗ್

**<><*<><>*><>**

ಉತ್ತರಪ್ರದೇಶದ ಪ್ರಯಾಗ್‌ರಾಜ್‌ನಲ್ಲಿ ಮಹಾಕುಂಭ ಮೇಳ ನಾಳೆ ಅಮೃತ ಸ್ನಾನದೊಂದಿಗೆ ಆರಂಭವಾಗಲಿದೆ. ೪೫ ದಿನಗಳ ಕಾಲ ನಡೆಯಲಿರುವ ಮಹಾಕುಂಭ ಮೇಳದಲ್ಲಿ ಲಕ್ಷಾಂತರ ಯಾತ್ರಿಕರು ಭಾಗವಹಿಸುತಿದ್ದು, ಇದಕ್ಕಾಗಿ ವ್ಯಾಪಕ ರಕ್ಷಣೆ, ಆರೋಗ್ಯ, ಸುರಕ್ಷತಾ ಕ್ರಮಗಳನ್ನು ಕೈಗೊಳ್ಳಲಾಗಿದೆ. ಆರೋಗ್ಯ ರಕ್ಷಣೆಗೆ ಪ್ರಾಮುಖ್ಯತೆ ನೀಡಲಾಗಿದ್ದು, ಇದೇ ದೃಷ್ಟಿಕೋನದೊಂದಿಗೆ ನೇತ್ರ ಕುಂಭ ಮೇಳ, ಆಯೋಜಿಸಲಾಗಿದೆ. ಈ ಕಾರ್ಯಕ್ರಮದಡಿ ಮೂರು ಲಕ್ಷ ಕನ್ನಡಕಗಳನ್ನು ವಿತರಿಸುವುದು ಮತ್ತು ಐದು ಲಕ್ಷ ಹೊರರೋಗಿಗಳನ್ನು ತಪಾಸಣೆ ಮಾಡುವುದು ಸೇರಿದಂತೆ ದಿನಕ್ಕೆ ಹತ್ತು ಸಾವಿರ ಸಮಾಲೋಚನೆಗಳ ಗುರಿಯನ್ನು ಹೊಂದಿದೆ. ನೇತ್ರ ಕುಂಭದಲ್ಲಿ ನೇತ್ರದಾನ

ಶಿಬಿರವನ್ನು ಸಹ ನಡೆಸಲಾಗುತ್ತಿದೆ. ಪೆರೇಡ್ ಮೈದಾನದಲ್ಲಿರುವ ಸೆಂಟ್ರಲ್ ಆಸ್ಪತ್ರೆಯು ೧೦೦ ಹಾಸಿಗೆಗಳನ್ನು ಹೊಂದಿದ್ದು, ಹೊರರೋಗಿ ಸಮಾಲೋಚನೆ ಜೊತೆಗೆ  ಐಸಿಯು ಆರೈಕೆಯನ್ನು ಒಳಗೊಂಡಿದೆ. ಅರೈಲ್‌ನಲ್ಲಿರುವ ಸಬ್-ಸೆಂಟ್ರಲ್ ಆಸ್ಪತ್ರೆ ಮತ್ತು ಪ್ರಯಾಗ್‌ರಾಜ್ ಜಂಕ್ಷನ್, ನೈನಿ ಮತ್ತು ಸುಬೇದರ್‌ಗಂಜ್ ಸೇರಿದಂತೆ ಪ್ರಮುಖ ರೈಲ್ವೆ ನಿಲ್ದಾಣಗಳಲ್ಲಿ ವೈದ್ಯಕೀಯ ತಪಾಸಣಾ ಕೊಠಡಿಗಳ ವ್ಯವಸ್ಥೆ ಮಾಡಲಾಗಿದೆ. ದೇಶಾದ್ಯಂತದ ೨೪೦ ವೈದ್ಯರ ತಂಡ ಮಹಾ ಕುಂಭಮೇಳದ ಆರೋಗ್ಯ ರಕ್ಷಣಾ ವ್ಯವಸ್ಥೆಯ ಭಾಗವಾಗಿದ್ದಾರೆ.

<><*<><>*><>

ಉತ್ತರಾಖಂಡದ ದೆಹರಾಡುನ್‌ನಲ್ಲಿಂದು ಮೊದಲ ಅಂತಾರಾಷ್ಟ್ರೀಯ ಉತ್ತರಾಖಂಡಿ ಪ್ರವಾಸಿ ಸಮಾವೇಶ ನಡೆಯಲಿದೆ.  ಈ ಸಮಾವೇಶವನ್ನು ಮುಖ್ಯಮಂತ್ರಿ ಪುಷ್ಕರ್ ಸಿಂಗ್ ಧಾಮಿ ಉದ್ಘಾಟಿಸಲಿದ್ದು, ೧೭ ದೇಶಗಳಿಂದ ಅನಿವಾಸಿ ಭಾರತೀಯ ಸಮುದಾಯದ ಸದಸ್ಯರು ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ಈ ಸಮಾವೇಶ ರಾಜ್ಯದಲ್ಲಿ ಹೂಡಿಕೆಗಳನ್ನು ಉತ್ತೇಜಿಸಲಿದ್ದು, ಆತಿಥ್ಯ ಮತ್ತು ಕ್ಷೇಮ, ಕೌಶಲ್ಯಾಭಿವೃದ್ಧಿ, ವಿದೇಶಗಳಲ್ಲಿ ಉದ್ಯೋಗ, ಉನ್ನತ ಶಿಕ್ಷಣ, ತೋಟಗಾರಿಕೆ ಮತ್ತು ಗಿಡಮೂಲಿಕೆಗಳ ಕ್ಷೇತ್ರದಲ್ಲಿ ಸಾಮರ್ಥ್ಯ ಕುರಿತು ಚರ್ಚೆಗಳನ್ನು ಒಳಗೊಂಡಿರಲಿವೆ. ಸಮಾವೇಶದ ಕುರಿತು ಮಾಹಿತಿ ನೀಡಿದ ರಾಜ್ಯಸಭಾ ಸದಸ್ಯ ಮಹೇಂದ್ರ ಭಟ್, ಈ ಕಾರ್ಯಕ್ರಮ ರಾಜ್ಯದಲ್ಲಿ ಹೂಡಿಕೆಗಳ ಸಾಧ್ಯತೆಗಳನ್ನು ಹೆಚ್ಚಿಸುವುದಾಗಿ ತಿಳಿಸಿದರು.

ಧ್ವನಿ: ಮಹೇಂದ್ರ ಭಟ್

<><*<><>*><>

ಅಯೋಧ್ಯೆಯ ಶ್ರೀರಾಮ ಜನ್ಮಭೂಮಿ ಮಂದಿರದಲ್ಲಿ ಬಾಲರಾಮನ ಪ್ರತಿಷ್ಠಾಪನೆಯ ಮೊದಲ ವಾರ್ಷಿಕೋತ್ಸವ ನಿನ್ನೆ ಆರಂಭವಾಯಿತು. ಮೂರು ದಿನಗಳ ಕಾಲ ನಡೆಯುತ್ತಿರುವ ಪ್ರತಿಷ್ಠಾ ದ್ವಾದಶಿ ಉತ್ಸವದಲ್ಲಿ ಲಕ್ಷಾಂತರ ಶ್ರದ್ಧಾಳುಗಳು ಪಾಲ್ಗೊಂಡು ಬಾಲರಾಮನ ದರ್ಶನ ಪಡೆಯುತ್ತಿದ್ದಾರೆ.

<><*<><>*><>

ದೆಹಲಿ ವಿಧಾನಸಭಾ ಚುನಾವಣೆಗೆ ಬಿಜೆಪಿ ೨೯ ಅಭ್ಯರ್ಥಿಗಳ ಎರಡನೇ ಪಟ್ಟಿಯನ್ನು ಬಿಡುಗಡೆ ಮಾಡಿದೆ. ಮಾಜಿ ಶಾಸಕ ಕಪಿಲ್ ಮಿಶ್ರಾ ಅವರನ್ನು ಕರವಾಲ್ ನಗರದಿಂದ, ಹರೀಶ್ ಖುರಾನಾ ಅವರನ್ನು ಮೋತಿ ನಗರದಿಂದ ಮತ್ತು ಇತ್ತೀಚೆಗೆ ಆಮ್ ಆದ್ಮಿ ಪಕ್ಷದಿಂದ ಬಿಜೆಪಿಗೆ ಸೇರ್ಪಡೆಗೊಂಡ

ಪ್ರಿಯಾಂಕಾ ಗೌತಮ್ ಅವರನ್ನು ಕೊಂಡ್ಲಿಯಿಂದ ಕಣಕ್ಕಿಳಿಸಲಾಗಿದೆ. ಈ ಹಿಂದೆ, ಪಕ್ಷ ೨೯ ಅಭ್ಯರ್ಥಿಗಳ ಮೊದಲ ಪಟ್ಟಿಯನ್ನು ಬಿಡುಗಡೆ ಮಾಡಿತ್ತು.

<><*<><>*><>

ಪುದುಚೇರಿಯಲ್ಲಿ ಇತ್ತೀಚೆಗೆ ಖಾಸಗಿ ಆಸ್ಪತ್ರೆಗೆ ದಾಖಲಾಗಿದ್ದ ಮಗುವಿನಲ್ಲಿ ಹ್ಯೂಮನ್ ಮೆಟಾಪ್ನ್ಯೂಮೋವೈರಸ್, ಎಚ್.ಎಮ್.ಪಿ.ವಿ ಪತ್ತೆಯಾಗಿದೆ ಎಂದು ಪುದುಚೇರಿ ಆರೋಗ್ಯ ಇಲಾಖೆ ದೃಢಪಡಿಸಿತ್ತು. ಆರೋಗ್ಯ ಇಲಾಖೆಯ ಇತ್ತೀಚಿನ ಪ್ರಕಟಣೆಯ ಪ್ರಕಾರ, ಮಗು ಸಂಪೂರ್ಣವಾಗಿ ಚೇತರಿಸಿಕೊಂಡಿದ್ದು, ಡಿಸ್ಚಾರ್ಜ್ ಮಾಡಲಾಗಿದೆ ಎಂದು ತಿಳಿಸಲಾಗಿದೆ.

<><*<><>*><>

ಸ್ವಚ್ಛ ಹಾಗೂ ಸುಸ್ಥಿರ ಇಂಧನ ತಂತ್ರಜ್ಞಾನಗಳಿಗೆ ಒತ್ತಾಸೆ ನೀಡುವ 'ಭಾರತ್ ಕ್ಲೀನ್‌ಟೆಕ್ ತಯಾರಿಕಾ ಮಂಚ್' ಗೆ ಕೇಂದ್ರ ವಾಣಿಜ್ಯೋದ್ಯಮ ಖಾತೆ ಸಚಿವ ಪಿಯುಷ್ ಗೋಯಲ್ ನಿನ್ನೆ ಚಾಲನೆ ನೀಡಿದರು. 'ಭಾರತ ಹವಾಮಾನ ವೇದಿಕೆ-೨೦೨೫' ರಡಿ ಈ ವ್ಯವಸ್ಥೆಯನ್ನು ರೂಪಗೊಳಿಸಲಾಗಿದೆ. ಸೌರ, ಪವನ, ಜಲಜನಕ ಮತ್ತು ಬ್ಯಾಟರಿ ಸಂಗ್ರಹ ಕ್ಷೇತ್ರಗಳಿಗೆ ಸ್ವಚ್ಛ ತಂತ್ರಜ್ಞಾನದ ಮೌಲ್ಯ ಸರಣಿಯನ್ನು ಒದಗಿಸಲು ಈ ವೇದಿಕೆಯನ್ನು ವಿನ್ಯಾಸಗೊಳಿಸಲಾಗಿದೆ. ಈ ಸಂದರ್ಭದಲ್ಲಿ ಮಾತನಾಡಿದ ಪಿಯುಷ್ ಗೋಯಲ್, ಈ ಉಪಕ್ರಮ ಭಾರತಕ್ಕೆ ಸುಸ್ಥಿರತೆಯಲ್ಲಿ ಜಾಗತಿಕವಾಗಿ ಮುಂಚೂಣಿ ಸ್ಥಾನ ಒದಗಿಸಲು ನೆರವಾಗಲಿದೆ ಎಂದರು.

<><*<><>*><>

ಉಪರಾಷ್ಟ್ರಪತಿ ಜಗದೀಪ್ ಧನಕರ್, ಬೆಂಗಳೂರಿನಲ್ಲಿ ನಿನ್ನೆ ಭಾರತ್ ಹೆವಿ ಎಲೆಕ್ಟ್ರಿಕಲ್ಸ್ ಲಿಮಿಟೆಡ್-ಬಿಎಚ್‌ಇಎಲ್ ವಿದ್ಯುನ್ಮಾನ ವಿಭಾಗದಲ್ಲಿ ಅತ್ಯಾಧುನಿಕ ಮೇಲ್ಮೈ ಆರೋಹಣ ತಂತ್ರಜ್ಞಾನ ವಿಭಾಗಕ್ಕೆ ಭೇಟಿ ನೀಡಿ, ಪರಿಶೀಲನೆ ನಡೆಸಿದರು. ಈ ಸಂದರ್ಭದಲ್ಲಿ ಕೇಂದ್ರ ಸಚಿವ ಕುಮಾರಸ್ವಾಮಿ ಉಪಸ್ಥಿತರಿದ್ದರು. ಈ ವೇಳೆ ಮಾತನಾಡಿದ ಅವರು, ಸಂಶೋಧನೆ, ಅಭಿವೃದ್ಧಿ ಮತ್ತು ನಾವೀನ್ಯತೆ ಯಶಸ್ಸಿನ ಮೂಲಮಂತ್ರಗಳಾಗಿರಬೇಕು. ದೇಶದ ಪ್ರಗತಿಯು ಕಳೆದ ೧೦ ವರ್ಷಗಳಲ್ಲಿ ಅದ್ಭುತ ಪ್ರಗತಿ ಕಂಡಿದೆ ಎಂದು ಹೇಳಿದರು. ಇದಕ್ಕೂ ಮುನ್ನ 'ಭಾರತ್ ಎಲೆಕ್ಟ್ರಾನಿಕ್ಸ್ ಲಿಮಿಟೆಡ್-ಬಿಇಎಲ್' ನಲ್ಲಿ ಸಂಶೋಧನೆ ಮತ್ತು ಅಭಿವೃದ್ಧಿ ಪ್ರಶಸ್ತಿ ಪ್ರದಾನ ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿದ ಜಗದೀಪ್ ಧನ್‌ಕರ್ ಜಗತ್ತು ನಮ್ಮ ಸಂಶೋಧನೆ ಮತ್ತು ಅಭಿವೃದ್ಧಿ ನೋಡಿ ನಿಬ್ಬೆರಗಾದಾಗ ಮಾತ್ರ ಆತ್ಮನಿರ್ಭರವಾಗಲು ಸಾಧ್ಯ ಎಂದು ಹೇಳಿದರು. ನಮ್ಮ ಗುರಿಯಂತೆ

ನೂರಕ್ಕೆ ನೂರರಷ್ಟು ಸ್ವದೇಶೀಕರಣವಾಗಬೇಕು. ನಟ್ ಮತ್ತು ಬೋಲ್ಟ್‌ಗಳ ಸ್ವದೇಶೀಕರಣದಿಂದ ತೃಪ್ತರಾಗದೇ, ಸಂಶೋಧನೆ ಮತ್ತು ಅಭಿವೃದ್ಧಿಯಿಂದ ಮುನ್ನಡೆದಾಗ ಮಾತ್ರ ನಾವು ಆರ್ಥಿಕ ಶಕ್ತಿಯಾಗಿ ಹೊರಹೊಮ್ಮಲು ಸಾಧ್ಯ ಎಂದು ಅವರು ಅಭಿಪ್ರಾಯಪಟ್ಟರು.

<><*<><>*><>

ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ನಿನ್ನೆ ಮುಂಬೈನ ಮಲಾಡ್ ಪಶ್ಚಿಮದ ಮಿತ್ ಚೌಕಿಯಲ್ಲಿ ಟಿ ಆಕಾರದ ಮೇಲ್ಸೇತುವೆಯ ದಕ್ಷಿಣ ಭಾಗವನ್ನು ಉದ್ಘಾಟಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು, ಮಲಾಡ್ ನಿವಾಸಿಗಳು ಮತ್ತು ಹತ್ತಿರದ ಪ್ರದೇಶಗಳ ಜನರಿಗೆ ಸಂಚಾರವನ್ನು ಸುಗಮಗೊಳಿಸುವಲ್ಲಿ ಈ ಮೇಲ್ಸೇತುವೆ ಪ್ರಮುಖ ಪಾತ್ರ ವಹಿಸುತ್ತದೆ. ಈ ಯೋಜನೆಯು ಸಾರ್ವಜನಿಕ ಕಲ್ಯಾಣಕ್ಕೆ ಸರ್ಕಾರದ ಬದ್ಧತೆಯ ಸಂಕೇತವಾಗಿದೆ ಎಂದು ಅವರು ಹೇಳಿದರು ಇದು ಸಾವಿರಾರು ಪ್ರಯಾಣಿಕರಿಗೆ ಸಂಚಾರ ದಟ್ಟಣೆಯನ್ನು ಕಡಿಮೆ ಮಾಡುತ್ತದೆ ಮತ್ತು ಸಂಪರ್ಕವನ್ನು ಹೆಚ್ಚಿಸುತ್ತದೆ ಎಂದರು.

<><*<><>*><>

೨೦೪೭ ರ ವೇಳೆಗೆ ಭಾರತದ ಭವಿಷ್ಯವನ್ನು ರೂಪಿಸುವಲ್ಲಿ ಮೂಲಸೌಕರ್ಯ, ಉತ್ಪಾದಕತೆ, ಕಾನೂನು ಸುಧಾರಣೆಗಳು ಮತ್ತು ಸಮಗ್ರ ಅಭಿವೃದ್ಧಿಯಲ್ಲಿ ಹೂಡಿಕೆ ಪ್ರಮುಖ ಪಾತ್ರ ವಹಿಸುತ್ತವೆ ಎಂದು ಕೇಂದ್ರ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಹೇಳಿದ್ದಾರೆ. ನಿನ್ನೆ ಗೋಖಲೆ ಇನ್ಸ್ಟಿಟ್ಯೂಟ್ ಆಫ್ ಎಕನಾಮಿಕ್ಸ್‌ನಲ್ಲಿ ನಡೆದ ಪುಣೆ ಸಾರ್ವಜನಿಕ ನೀತಿ ಉತ್ಸವದ ಸಮಾರೋಪ ಸಮಾರಂಭದಲ್ಲಿ ಅವರು ಮಾತನಾಡಿದರು. ಅಭಿವೃದ್ಧಿ ಹೊಂದಿದ ಭಾರತದ ನಾಲ್ಕು ಆಧಾರಸ್ತಂಭಗಳಾದ ಮೂಲಸೌಕರ್ಯ, ಉತ್ಪಾದಕತೆ, ಕಾನೂನು ಸುಧಾರಣೆಗಳು ಮತ್ತು ಸಮಗ್ರ ಅಭಿವೃದ್ಧಿಯ ಮೇಲೆ ಕೇಂದ್ರೀಕರಿಸಿದ ಅವರು, ದೂರಸಂಪರ್ಕ ಕ್ಷೇತ್ರದಲ್ಲಿ ಕೇಂದ್ರ ಸರ್ಕಾರ ಸಾಧಿಸಿರುವ ಪ್ರಗತಿ ಕುರಿತು ಪ್ರಸ್ತಾಪಿಸಿದರು.

<><*<><>*><>

ಗುಜರಾತ್ ರಾಜಕೋಟ್‌ನಲ್ಲಿಂದು ನಡೆಯುವ ಮೂರು ಪಂದ್ಯಗಳ ಮಹಿಳಾ ಅಂತಾರಾಷ್ಟ್ರೀಯ ಏಕದಿನ ಕ್ರಿಕೆಟ್ ಸರಣಿಯ ಎರಡನೇ ಪಂದ್ಯದಲ್ಲಿ ಭಾರತ ಹಾಗೂ ಐರ್ಲೆಂಡ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ಬೆಳಗ್ಗೆ ೧೧ ಗಂಟೆಗೆ ಆರಂಭವಾಗಲಿದೆ. ಶುಕ್ರವಾರ ನಡೆದ

ಮೊದಲ ಪಂದ್ಯದಲ್ಲಿ ಭಾರತ ೭ ವಿಕೆಟ್‌ಗಳ ಜಯ ಸಾಧಿಸಿ ಸರಣಿಯಲ್ಲಿ ಮುನ್ನಡೆ ಸಾಧಿಸಿದೆ. ಸರಣಿಯ ಕೊನೆಯ ಪಂದ್ಯ ಇದೇ ೧೫ ರಂದು ನಡೆಯಲಿದೆ.

<><*<><>*><>

ಕಳೆದ ಹತ್ತು ವರ್ಷಗಳಲ್ಲಿ ದೇಶಾದ್ಯಂತ ೮೦ ಕೋಟಿ ಸಸಿಗಳನ್ನು ನಡೆಲಾಗಿದೆ  ಎಂದು ಕೇಂದ್ರ ಸಂಸ್ಕೃತಿ ಮತ್ತು ಪ್ರವಾಸೋದ್ಯಮ ಸಚಿವ ಗಜೇಂದ್ರ ಸಿಂಗ್ ಶೇಖಾವತ್ ತಿಳಿಸಿದ್ದಾರೆ. ಅವರು, ನಿನ್ನೆ ಕೋಲ್ಕತ್ತಾದ ಸೈನ್ಸ್ ಸಿಟಿಯಲ್ಲಿ ಆನ್ ದಿ ಎಡ್ಜ್ ಎಂಬ ಹವಾಮಾನ ಬದಲಾವಣೆಯ ಅತ್ಯಾಧುನಿಕ ಗ್ಯಾಲರಿಯನ್ನು ಉದ್ಘಾಟಿಸಿ ಮಾತನಾಡುತ್ತಿದ್ದರು.

ಪ್ರಧಾನಮಂತ್ರಿ ನರೇಂದ್ರ ಮೋದಿಯವರು ಆರಂಭಿಸಿದ 'ಏಕ್  ಪೇಡ್ ಮಾ ಕೆ ನಾಮ್' ಅಭಿಯಾನದ ಮಹತ್ವವನ್ನು ವಿವರಿಸಿದ ಅವರು, ಪರಿಸರ ಸಂರಕ್ಷಣೆಯ ಜವಾಬ್ದಾರಿಯನ್ನು ಸರ್ಕಾರ, ವಿಜ್ಞಾನಿಗಳು ಹಾಗೂ ಜನಸಾಮಾನ್ಯರು ಹಂಚಿಕೊಳ್ಳಬೇಕು

<><*<><>*><>

ಭಾರತೀಯ ಕ್ರಿಕೆಟ್ ನಿಯಂತ್ರಣಾ ಮಂಡಳಿ-ಬಿಸಿಸಿಐ, ಇಂಗ್ಲೆಂಡ್ ವಿರುದ್ಧದ ಅಂತಾರಾಷ್ಟ್ರೀಯ ಟಿ-೨೦ ಸರಣಿಗಾಗಿ ೧೫ ಸದಸ್ಯರ ತಂಡವನ್ನು ಪ್ರಕಟಿಸಲಾಗಿದೆ. ಸೂರ್ಯಕುಮಾರ್ ಯಾದವ್ ನಾಯಕರಾಗಿದ್ದು, ಅಕ್ಸರ್ ಪಟೇಲ್ ಉಪನಾಯಕರಾಗಿದ್ದಾರೆ.  ಮೊಹಮ್ಮದ್ ಶಮಿ, ಸಂಜು ಸಾಮ್ಸನ್, ಅಭಿಷೇಕ್ ಶರ್ಮಾ, ತಿಲಕ್ ವರ್ಮಾ, ಹಾರ್ದಿಕ್ ಪಾಂಡ್ಯ, ರಿಂಕು ಸಿಂಗ್, ನಿತೀಶ್ ಕುಮಾರ್ ರೆಡ್ಡಿ, ಹರ್ಷೀತ್ ರಾಣಾ, ಹರ್ಷದೀಪ್ ಸಿಂಗ್, ವರುಣ್ ಚಕ್ರವರ್ತಿ, ರವಿ ಬಿಷ್ಣೋಯ್, ವಾಷಿಗ್ಟನ್ ಸುಂದರ್ ಮತ್ತು ದೃವ ಜುರೆಲ್ ತಂಡದಲ್ಲಿ ಸ್ಥಾನಪಡೆದಿದ್ದಾರೆ. ಮೊದಲ ಪಂದ್ಯ ಕೋಲ್ಕತ್ತಾದಲ್ಲಿ ಇದೇ ೨೨ ರಂದು ನಡೆಯಲಿದೆ.

<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು  <>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೧೨ ಕ್ಕೆ <>*><>